ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1496
ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	24.09.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಕಾಮಗಾರಿ ಗಳ ಅನುಷ್ಠಾನದಲ್ಲಿ ವಿಳಂಬವನ್ನು ತಪ್ಪಿಸುವ ಸಲುವಾಗಿ ರೂ.5.00 ಲಕ್ಷದೊಳಗಿನ ಕಾಮಗಾರಿಗಳನ್ನು ನೋಂದಾಯಿತ ಗುತ್ತಿಗೆದಾರರಿಗೆ ವಹಿಸಿ ಕೊಡುವ ಕರಾರುಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಕಾರ್ಯಪಾಲಕ ಅಭಿಯಂತರರಿಗೆ ನೀಡಲಾಗಿದೆಯೇ;	ಹೌದು, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:201:ಆರ್‌ಆರ್‌ಸಿ:2020 ದಿನಾಂಕ: 04-09-2020 ಮತ್ತು ಸುತ್ತೋಲೆ ಸಂ: ಗ್ರಾಅಪ:24:ಆರ್‌ಆರ್‌ಸಿ 2020, ದಿನಾಂಕ:21.01.2021 ರಲ್ಲಿ ದಿನಾಂಕ: 04.09.2020 ರಿಂದ 03.09.2021 ರವರೆಗೆ ರೂ. 5.00 ಲಕ್ಷದವರೆಗಿನ ಕಾಮಗಾರಿಗಳ್ನು ನೊಂದಾಯಿತ ಗುತ್ತಿಗೆದಾರರಿಗೆ ಕಾರ್ಯಪಾಲಕ ಇಂಜಿನಿಯರ್ ರವರ ಹಂತದಲ್ಲಿ ಅನುಮೋದನೆ ನೀಡುವ ಅವಕಾಶವನ್ನು ಕಲ್ಪಿಸಲಾಗಿತ್ತು.
ಆ.	ಹಾಗಿದ್ದಲ್ಲಿ, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ತಾಂತ್ರಿಕ ವಿಭಾಗ, ಮಂಡ್ಯ ಇವರು ಸದರಿ ಕಾಮಗಾರಿಗಳನ್ನು ತ್ವರಿತವಾಗಿ ನಿರ್ವಹಿಸದೆ, ಎಲ್ಲಾ ಕಾಮಗಾರಿಗಳ ಕರಾರನ್ನು ಅಧೀಕ್ಷಕ ಅಭಿಯಂತರರು ಹಾಗೂ ಮುಖ್ಯ ಅಭಿಯಂತರರ ಕಚೇರಿಗೆ ಕಳುಹಿಸುವ ಮೂಲಕ ಅನಗತ್ಯವಾಗಿ ವಿಳಂಬ ಧೋರಣೆ ಅನುಸರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ. ಇಂತಹ ಪ್ರಕರಣಗಳು ಸರ್ಕಾರಕ್ಕೆ ಸಲ್ಲಿಕೆಯಾದಲ್ಲಿ ವಿಳಂಭಕ್ಕೆ ಆಸ್ಪದ ನೀಡದೇ ತ್ವರಿತವಾಗಿ ಅನುಮೋದನೆ ನೀಡುವಂತೆ ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗುವುದು.
ಇ.	ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಪೂರ್ಣ ವಿವರ ನೀಡುವುದು)	

ಕಡತ ಸಂಖ್ಯೆ: ಗ್ರಾಅಪ:ಅಧಿ-15ವಿಸವಿಪ/1496:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು